ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

`ಸಿ' ಮತ್ತು `ಡಿ' ವೃಂದದ ಸಿಬ್ಬಂದಿಯನ್ನು ಹೊರಗುತ್ತಿಗೆ ಮೂಲಕ ನೇಮಕ ಮಾಡುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

1268 (1552) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಖಾಯಂ ಹುದ್ದೆಗಳ ಎದುರಾಗಿ ಹೊರಗುತ್ತಿಗೆ ಮೂಲಕ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆಯೇ ; (ಇಲಾಖಾವಾರು ವಿವರ ನೀಡುವುದು)

(ಆ) ಈ ರೀತಿ ಸರ್ಕಾರದಿಂದ ಮಂಜೂರಾಗಿರುವ ಖಾಯಂ ಹುದ್ದೆಗಳಿಗೆ (ಎಲ್ಲಾ `ಸಿ' ಮತ್ತು `ಡಿ' ವೃಂದದ) ಹೊರಗುತ್ತಿಗೆ ಮೂಲಕ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಆರ್ಥಿಕ ಇಲಾಖೆಯಿಂದ ಅನುಮತಿ ಪಡೆಯುವುದು ಅವಶ್ಯವಿದೆಯೇ; (ಸಂಬಂಧಿಸಿದ ಎಲ್ಲಾ ಆದೇಶಗಳನ್ನು ಒದಗಿಸುವುದು) ಅವಶ್ಯವಿದ್ದಲ್ಲಿ, ಅದಕ್ಕೆ ಕಾರಣ ನೀಡುವುದು;

(ಇ) ಖಾಯಂ ಹುದ್ದೆಗಳಿಗೆ ಹೊರಗುತ್ತಿಗೆ ಮೂಲಕ ನೇಮಿಸಿಕೊಳ್ಳಲು ಇಲಾಖೆಯ ಮುಖ್ಯಸ್ಥರುಗಳಿಗೆ ಅಧಿಕಾರ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಈ) ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನ ನೀಡುವುದರಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣ ಏನು ; ಇದನ್ನು ಸರಿಪಡಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ?